# ಅನ್ನದಾತನಿಗೆ ಸಿಕ್ತು ಸರ್ಕಾರದ ಬೆಂಬಲ!

13/12/19

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಅತಿವೃಷ್ಟಿ, ಬೆಲೆ ಕುಸಿತದಿಂದ ಕಂಗಾಲಾಗಿರುವ ರೈತನ ನೆರವಿಗೆ ಧಾವಿಸಿರುವ ಸರ್ಕಾರ, ಬೆಂಬಲ ಬೆಲೆಯಲ್ಲಿ ರೈತನ ಉತ್ಪನ್ನ ಖರೀದಿಗೆ ಮುಂದಾಗಿದೆ. ಬಿಳಿ ಜೋಳ, ರಾಗಿ, ಭತ್ತ ಹಾಗೂ ಸೋಯಾ ಅವರೆಯನ್ನು ಜನವರಿಯಿಂದ ಬೆಂಬಲ ಬೆಲೆಯಲ್ಲಿ ಖರೀದಿಸಲು ಸರ್ಕಾರ ಸಿದ್ಧತೆ ನಡೆಸಿದೆ. ಈ ಸಂಬಂಧ ಸಂಪುಟ ಉಪ ಸಮಿತಿ ಸಭೆಯಲ್ಲಿ ಗುರುವಾರ ತೀರ್ಮಾನ ಕೈಗೊಳ್ಳಲಾಗಿದೆ.

» ಬೆಂಬಲ ಬೆಲೆಯಲ್ಲಿ ರೈತನ ಉತ್ಪನ್ನ ಖರೀದಿ

» ಬಿಳಿ ಜೋಳ, ಭತ್ತ, ರಾಗಿ, ಸೋಯಾ ಅವರೆ ಖರೀದಿ

» ಸಂಪುಟ ಉಪ ಸಮಿತಿ ಸಭೆಯಲ್ಲಿ ನಿರ್ಧಾರ



## ಬೆಂಬಲ ಬೆಲೆ ಖರೀದಿ ದರ (ಕ್ವಿಂಟಲ್‌ಗೆ)

| | |
|---|---|
| ಭತ್ತ ಸಾಮಾನ್ಯ | 1,815 ರೂ. |
| ಭತ್ತ ಎ-ಗ್ರೇಡ್ | 1,835 ರೂ. |
| ಬಿಳಿ ಜೋಳ ಹೈಬ್ರೀಡ್ | 2,550 ರೂ. |
| ಮಾಲ್ದಂಡಿ ಜೋಳ | 2,570 ರೂ. |
| ರಾಗಿ | 3,150 ರೂ. |

ಡಿಸಿಎಂ ಲಕ್ಷ್ಮಣ ಸವದಿ, ಸಚಿವರಾದ ಕೆ.ಎಸ್. ಈಶ್ವರಪ್ಪ, ಬಸವರಾಜ ಬೊಮ್ಮಾಯಿ, ಪ್ರಭು ಚೌಹ್ಹಾಣ್ ಈ ಸಭೆಯಲ್ಲಿ ಉಪಸ್ಥಿತರಿದ್ದರು. 1.75 ಲಕ್ಷ ಮೆಟ್ರಿಕ್ ಟನ್ ಭತ್ತ, 2 ಲಕ್ಷ ಮೆ. ಟನ್ ರಾಗಿ ಮತ್ತು 1,241 ಮೆ. ಟನ್ ಬಿಳಿ/ಹೈಬ್ರೀಡ್ ಜೋಳದ ಅಂದಾಜು ಪ್ರಮಾಣವನ್ನು ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿಸಲು ತೀರ್ಮಾನಿಸಲಾಗಿದೆ. ಪ್ರತಿ ರೈತರಿಂದ 40 ಕ್ವಿಂಟಾಲ್ ಭತ್ತ, 75 ಕ್ವಿಂಟಾಲ್ ರಾಗಿ ಹಾಗೂ 75 ಕ್ವಿಂಟಾಲ್ ಜೋಳ ಖರೀದಿಸಲಾಗುವುದು. ಭತ್ತ, ರಾಗಿ ಮತ್ತು ಬಿಳಿ ಜೋಳ ಖರೀದಿ ಪ್ರಕ್ರಿಯೆ ಮಾರ್ಚ್ 31ರವರೆಗೆ ನಡೆಯಲಿದೆ. ಭತ್ತಕ್ಕೆ ಸಂಬಂಧಿಸಿದಂತೆ ಆಯಾ ಜಿಲ್ಲೆಗಳಲ್ಲಿ ಅಕ್ಕಿಯನ್ನಾಗಿ ಪರಿವರ್ತಿಸಲು ಜಿಲ್ಲಾಧಿಕಾರಿಗಳಿಂದ ಆಯ್ಕೆ ಮಾಡಿ ಗುರುತಿಸಿದ ಅಕ್ಕಿ ಗಿರಣಿಗೆ ಉತ್ಪನ್ನ ಒದಗಿಸಲಾಗುತ್ತದೆ. ಆಹಾರ ನಾಗರಿಕ ಸರಬರಾಜು ನಿಗಮ, ರಾಜ್ಯ ಉಗ್ರಾಣ ನಿಗಮ ಹಾಗೂ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಇವರ ಮೂಲಕ ನಿಯೋಜಿತ ಜಿಲ್ಲೆಗಳಲ್ಲಿ ಖರೀದಿಸಲು ಅನುಮೋದನೆ ನೀಡಲಾಗಿದೆ. ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚಿಸಿ ಈ ಸಮಿತಿ ಮೂಲಕ ಸ್ಥಳೀಯ ಅಗತ್ಯಕ್ಕೆ ಅನುಗುಣವಾಗಿ ಖರೀದಿ ಕೇಂದ್ರಗಳ ಸ್ಥಾಪನೆ ಹಾಗೂ ಇನ್ನಿತರ ಸಿಬ್ಬಂದಿಗಳ ನಿಯೋಜನೆಯನ್ನು ಕೈಗೊಳ್ಳಲು ಸಭೆ ತೀರ್ಮಾನಿಸಿದೆ. ರಾಜ್ಯದಲ್ಲಿ ಬೆಳೆದ ಸೋಯಾಬೀನ್ ಉತ್ಪನ್ನಗಳನ್ನು ಕೂಡ ಕನಿಷ್ಠ ಬೆಂಬಲ ಯೋಜನೆಯಲ್ಲಿ ರಾಜ್ಯ ಮಾರ್ಕೆಟಿಂಗ್ ಫೆಡರೇಷನ್ ಮೂಲಕ ಖರೀದಿಸಲು, ಶೇಂಗಾ ಹಾಗೂ ತೊಗರಿ ಬೆಳೆ ಉತ್ಪನವನ್ನು ಕೂಡ ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಭೆ ನಿರ್ಣಯಿಸಿದೆ.